<u>**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.**</u>

**ಸಿ.ಸಿ. ಸಂಖ್ಯೆಃ 620/2014**

**ಸಾಕ್ಷಿಯನ್ನು ದಿಃ 23.09.2024 ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.**

ಸಿ.ಡಬ್ಲ್ಯೂಃ **24** ಪಿ.ಡಬ್ಲ್ಯೂಃ **27**

| | |
|---|---|
| ಹೆಸರು | ಮಹದೇವು |
| ತಂದೆಯ ಹೆಸರು | ಜವರಯ್ಯ |
| ವಯಸ್ಸು | **56** ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಹುಣಸೂರು |

<u>**ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ**</u>

1. ಚಾಸಾ-1 ರಿಂದ 3 ರವರ ಪರಿಚಯ ಇಲ್ಲ. ಚಾಸಾ-4, 25 ರವರು ಗೊತ್ತು. ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ದಾಖಲೆ ಕೋರಿಕಾ ಬರವಣಿಗೆಗಳ ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ.106 ಎಂದು ಗುರುತಿಸಲಾಗಿದೆ, ಸಾಕ್ಷಿಯ ಸಹಿಯನ್ನು ನಿಪಿ.106(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಿದ್ದು, ಅದು ವರದರಾಜು ಅವರ ಕೋರಿಕಾ ಬರವಣಿಗೆಗಳ ಸಹಿಗಳಿಂದ ಕೂಡಿದ್ದು, ಅದರಲ್ಲಿ ಸಾಕ್ಷಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ.107 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಗಳನ್ನು ನಿಪಿ.107(ಎಫ್ ರಿಂದ ಜೆ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಸುಮಾರು 2 ವರ್ಷಗಳ ಹಿಂದೆ ನಾನು ಹಾಗೂ ಚಾಸಾ-25 ರವರು ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ಸಹಿ ಮಾಡಲು ಹೇಳಿದ್ದಕ್ಕೆ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ನಿಪಿ.106 ಹಾಗೂ 107 ರಲ್ಲಿ ಏನು ಬರೆದಿದೆ ಬೇರೆ ಯಾರು ಸಹಿ ಮಾಡಿದ್ದಾರೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಅಮಾನತ್ತು ಮಹಜರ್ ಮಾಡಿಲ್ಲ, ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿರುವುದಿಲ್ಲ. ನಾನು ಠಾಣೆಗೆ ಹೋದಾಗ ಚಾಸಾ-4 ರವರು ಇದ್ದರು.

ಪೊಲೀಸರು ಸದರಿ ಆರ್–53 ಎ ರಿಂದ 57 ಇ ಸಹಿಗಳನ್ನು ನನ್ನ ಸಮಕ್ಷಮ ಪಡೆದಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

## <u>ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ</u>

ದಿಃ 31.07.2013 ರಂದು ಚಾಸಾ–4 ರವರು ಪ್ರಸ್ತುತ ಪ್ರಕರಣದಲ್ಲಿ ಹುಣಸೂರು ಪಟ್ಟಣ ಠಾಣೆಗೆ ಪೊಲೀಸರು ನನ್ನನ್ನು ಹಾಗೂ ಚಾಸಾ–4 ಪಂಚಸಾಕ್ಷಿಯಾಗಲು ಕೋರಿದ ಮೇರೆಗೆ ನಾನು ಒಪ್ಪಿ ಪೊಲೀಸ್ ಠಾಣೆಗೆ ಹಾಜರಾಗಿದ್ದೆ ಎಂದರೆ ಸರಿಯಲ್ಲ. ನಂತರ ಪೊಲೀಸ್ ಠಾಣೆಯಲ್ಲಿ ಹಾಜರಿದ್ದ ವರದರಾಜು ಬಿನ್ ಶೆಟ್ಟಯ್ಯ ಅವರ ಕೋರಿಕಾ ಬರವಣಿಗೆಗಳ ಸಹಿಯನ್ನು ಪಡೆದಿರುವ ಹಾಳೆಗಳಿಗೆ ನನ್ನ ಹಾಗೂ ಚಾಸಾ–25, 4 ರವರ ಸಹಿಗಳಿಗೆ ಆರ್–53 ಎ ಇಂದ ಆರ್ 53 ಇ ಎಂದು ಕ್ರಮಾಂಕ ನೀಡಿ ಗುರುತು ಮಾಡಿ, 5 ಹಾಳೆಗಳನ್ನು ಒಂದು ಕವರ್ ನಲ್ಲಿ ಹಾಕಿ S ಎಂಬ ಅಕ್ಷರದಿಂದ ನನ್ನ ಸಮಕ್ಷಮ ಸಂಜೆ 5 – 6 ಗಂಟೆ ಸಮಯ ಮಹಜರ್ ಮಾಡಿ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

## ಪಾಟೀಸವಾಲುಃ ಆರೋಪಿ ಪರ ವಕೀಲರಿಂದ – ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸ. ಇದೆ.

(ಜೈಬುನ್ನಿಸಾ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ. ಎಂ. ಎಫ್. ಸಿ. , ಹುಣಸೂರು.